# ಕರ್ನಾಟಕ ವಿಧಾನ ಪರಿಷತ್ತು

1) ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 73 (768)

2) ಸದಸ್ಯರ ಹೆಸರು : ಶ್ರೀಮತಿ ಹೇಮಲತಾ ನಾಯಕ (ವಿಧಾನ ಸಭೆಯಿಂದ ಚುನಾಯಿತರಾದವರು)

3) ಉತ್ತರಿಸಬೇಕಾದ ದಿನಾಂಕ: : 21.08.2026

4) ಉತ್ತರಿಸುವವರು : ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು .

| ಕ್ರ ಸಂ. | ಪ್ರಶ್ನೆ | ಉತ್ತರ |
| --- | --- | --- |
| (ಅ) | ಕೊಪ್ಪಳ ನಗರದ ಸ್ವಾಮಿ ವಿವೇಕಾನಂದ ಶಾಲೆಯ ಬಳಿಯ ರೈಲ್ವೆ ಕ್ರಾಸಿಂಗ್‌ನಲ್ಲಿ ಅಂಡರ್ ಪಾಸ್ ನಿರ್ಮಾಣಕ್ಕಾಗಿ ಅಗತ್ಯವಿರುವ ಜಮೀನನ್ನು ಭೂಸ್ವಾಧೀನಪಡಿಸಿಕೊಳ್ಳಲು ಪ್ರಸ್ತಾವನೆ ಸಲ್ಲಿಸಲಾಗಿದೆಯೇ; ಪ್ರಸ್ತಾವನೆಯ ಪ್ರಸ್ತುತ ಸ್ಥಿತಿ ಏನು; (ವಿವರ ಒದಗಿಸುವುದು) | ಕೊಪ್ಪಳ ನಗರದ ಸ್ವಾಮಿ ವಿವೇಕಾನಂದ ಶಾಲೆಯ ಬಳಿಯ ರೈಲ್ವೇ ಕ್ರಾಸಿಂಗ್‌ನಲ್ಲಿ ಅಂಡರ್‌ಪಾಸ್ ನಿರ್ಮಾಣಕ್ಕಾಗಿ ಅಗತ್ಯವಿರುವ ಜಮೀನಿಗೆ ಸಂಬಂಧಿಸಿದಂತೆ ಜಿಲ್ಲಾಧಿಕಾರಿ ಕೊಪ್ಪಳ, ರವರು ದಿನಾಂಕ:05.12.2020ರಂದು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿ ಎಲ್.ಸಿ ಗೇಟ್ ಸಂಖ್ಯೆ:63ರಲ್ಲಿ ರಸ್ತೆ ಕೆಳಸೇತುವೆ ನಿರ್ಮಾಣದ ಸಲುವಾಗಿ ಸಾರ್ವಜನಿಕರಿಗೆ ರಸ್ತೆ ಸಂಪರ್ಕ ಕಲ್ಪಿಸುವ ಉದ್ದೇಶಕ್ಕಾಗಿ ಒಟ್ಟು ವಿಸ್ತೀರ್ಣ: 18,073-00 ಚದರ –ಅಡಿ ಪೈಕಿ ಕ್ಷೇತ್ರ 2,423-00 ಚದರ ಅಡಿ ಜಾಗವನ್ನು ನೇರವಾಗಿ ಖರೀದಿಸಲು ಹಾಗೂ ಕ್ಷೇತ್ರ 15,650-00 ಚದರ ಅಡಿ ಜಾಗವನ್ನು ಭೂಸ್ವಾಧೀನಪಡಿಸಿಕೊಳ್ಳಲು ಅನುಮೋದನೆ ನೀಡಲು ಹಾಗೂ ರೂ.1,57,68,572 ಗಳ ಅನುದಾನ ಬಿಡುಗಡೆ ಮಾಡಲು ಕೋರಿರುತ್ತಾರೆ.<br><br>ಸರ್ಕಾರವು ದಿನಾಂಕ:18.01.2021 ರ ಪತ್ರದಲ್ಲಿ ಕೊಪ್ಪಳ ನಗರದ ವ್ಯಾಪ್ತಿಯಲ್ಲಿ ಬರುವ Level Crossing Gate ಸಂಖ್ಯೆ: 63ರಲ್ಲಿ ರಸ್ತೆ ಕೆಳ ಸೇತುವೆ ನಿರ್ಮಾಣದ ಸಲುವಾಗಿ ಕ್ಷೇತ್ರ 18073-00 ಚದರ ಅಡಿ ಜಾಗವನ್ನು ಭೂಮಾಲೀಕರಿಂದ ನೇರವಾಗಿ ಖರೀದಿಸಲು ಸಲ್ಲಿಸಲಾಗಿರುವ ಪ್ರಸ್ತಾವನೆಗೆ ಸಂಬಂಧಿಸಿದ ಯೋಜನೆಯನ್ನು ರಾಜ್ಯ ಸರ್ಕಾರದಿಂದ ಕೈಗೆತ್ತಿಕೊಂಡಿರುವುದಿಲ್ಲವೆಂದು ತಿಳಿಸಲಾಗಿರುತ್ತದೆ.<br><br>ಮುಂದುವರೆದು, ಜಿಲ್ಲಾಧಿಕಾರಿ ಕೊಪ್ಪಳ ರವರಿಂದ ಪ್ರಸ್ತುತ ಹಂತದ ವಸ್ತಾವಾಂಶದ ವರದಿಯನ್ನು ಪಡೆಯಲಾಗಿದ್ದು, ಕೊಪ್ಪಳ ನಗರದ ಸ್ವಾಮಿ ವಿವೇಕಾನಂದ ಶಾಲೆಯ ಬಳಿಯ ರೈಲ್ವೆ ಕ್ರಾಸಿಂಗ್‌ನಲ್ಲಿ ಅಂಡರ್‌ಪಾಸ್ ನಿರ್ಮಾಣಕ್ಕಾಗಿ ಅಗತ್ಯವಿರುವ ಜಮೀನನ್ನು ಭೂಸ್ವಾಧೀನಪಡಿಸಿಕೊಳ್ಳಲು ನಿಯಮಾನುಸಾರ ಪ್ರಸ್ತಾವನೆಯನ್ನು ಸಲ್ಲಿಸಲು ದಿನಾಂಕ:19.01.2026 ಮತ್ತು 15.06.2026 ರಂದು ರೈಲ್ವೆ ಇಲಾಖೆಗೆ ಪತ್ರ ಬರೆಯಲಾಗಿದೆ. ಪ್ರಸ್ತಾವನೆ ಸ್ವೀಕೃತವಾದ ನಂತರ ಭೂಸ್ವಾಧೀನ ಪ್ರಕ್ರಿಯೆ ಪ್ರಾರಂಭಿಸಲಾಗುವುದು ಎಂಬುದಾಗಿ ತಿಳಿಸಿರುತ್ತಾರೆ. |

...2)

| | | |
|---|---|---|
| (ಆ) | ಸದರಿ ಸ್ಥಳದಲ್ಲಿ ಮಳೆಗಾಲದಲ್ಲಿ ನೀರು ನಿಲ್ಲುವುದರಿಂದ ಸಾರ್ವಜನಿಕರ ಸಂಚಾರಕ್ಕೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಸಾರ್ವಜನಿಕರ ಅನುಕೂಲಕ್ಕಾಗಿ ತಾತ್ಕಾಲಿಕವಾಗಿ ಯಾವ ಕ್ರಮ ಕೈಗೊಳ್ಳಲಾಗಿದೆ; (ವಿವರ ಒದಗಿಸುವುದು) | ಹೌದು, ಜಿಲ್ಲಾಡಳಿತದ ವತಿಯಿಂದ ಮಳೆಗಾಲದಲ್ಲಿ ಸದರಿ ಪ್ರದೇಶದಲ್ಲಿ ನೀರು ನಿಲುಗಡೆಯನ್ನು ತಪ್ಪಿಸಲು ತಾತ್ಕಾಲಿಕವಾಗಿ ನೀರಿನ ಮೋರಿ ವ್ಯವಸ್ಥೆಯನ್ನು ಮಾಡಲಾಗಿದೆ ಹಾಗೂ ಹೆಚ್ಚಿನ ನೀರು ಸಂಗ್ರಹಣೆಯಾಗಿದಲ್ಲಿ ಸಾರ್ವಜನಿಕರ ಅನುಕೂಲಕ್ಕಾಗಿ ಸಕ್ಕಿಂಗ್ ಯಂತ್ರವನ್ನು ಬಳಸಿ ನೀರನ್ನು ಸೆಳೆದು ಸುಗಮ ಸಂಚಾರಕ್ಕಾಗಿ ಅನುಕೂಲ ಕಲ್ಪಿಸಲಾಗುವುದು. |
| (ಇ) | ಅವೈಜ್ಞಾನಿಕ ರಸ್ತೆ ಹಾಗೂ ದಿಬ್ಬಗಳಿಂದಾಗಿ ಸದರಿ ಸ್ಥಳದಲ್ಲಿ ಅಪಘಾತಗಳು ಸಂಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಅಪಘಾತ ತಡೆಗೆ ಕೈಗೊಂಡ ಕ್ರಮಗಳೇನು; (ವಿವರ ಒದಗಿಸುವುದು) | ಕೊಪ್ಪಳ ನಗರದ ಸ್ವಾಮಿ ವಿವೇಕಾನಂದ ಶಾಲೆಯ ಬಳಿಯ ರೈಲ್ವೆ ಕ್ರಾಸಿಂಗ್‌ನಲ್ಲಿ ಅಂಡರ್ ಪಾಸ್ ಸ್ಥಳದಲ್ಲಿ ಇಲ್ಲಿಯವರೆಗೆ ಯಾವುದೇ ರಸ್ತೆ ಅಪಘಾತಗಳು ಸಂಭವಿಸಿರುವುದಿಲ್ಲ. |
| (ಈ) | ರೈಲ್ವೆ ಇಲಾಖೆಯು ಅಂಡರ್‌ಪಾಸ್ ನಿರ್ಮಿಸಲು ಸಿದ್ಧವಿದ್ದರೂ ಅಗತ್ಯ ಜಮೀನನ್ನು ರಾಜ್ಯ ಸರ್ಕಾರ ಭೂಸ್ವಾಧೀನ ಪಡಿಸಿಕೊಂಡು ರೈಲ್ವೆ ಇಲಾಖೆಗೆ ಹಸ್ತಾಂತರಿಸದಿರುವುದಕ್ಕೆ ಕಾರಣವೇನು; (ವಿವರ ಒದಗಿಸುವುದು) | ಪ್ರಸ್ತಾಪಿತ ಜಮೀನಿಗೆ ಸಂಬಂಧಿಸಿದಂತೆ ರೈಲ್ವೆ ಇಲಾಖೆಯಿಂದ ಈವರೆವಿಗೂ ಭೂಸ್ವಾಧೀನಕ್ಕಾಗಿ ಪ್ರಸ್ತಾವನೆ ಸ್ವೀಕೃತವಾಗಿರುವುದಿಲ್ಲ. |
| (ಉ) | ಅಗತ್ಯ ಜಮೀನನ್ನು ತ್ವರಿತವಾಗಿ ಭೂಸ್ವಾಧೀನಪಡಿಸಿಕೊಂಡು ರೈಲ್ವೆ ಇಲಾಖೆಗೆ ಹಸ್ತಾಂತರಿಸಿ ಶಾಶ್ವತ ಅಂಡರ್ ಪಾಸ್ ನಿರ್ಮಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ; ಕಾಮಗಾರಿ ಪೂರ್ಣಗೊಳಿಸಲು ಕಾಲಮಿತಿ ನಿಗದಿಪಡಿಸಲಾಗುವುದೇ? (ವಿವರ ಒದಗಿಸುವುದು) | ರೈಲ್ವೆ ಇಲಾಖೆಯಿಂದ ಜಿಲ್ಲಾಧಿಕಾರಿ, ಕೊಪ್ಪಳ, ರವರಿಗೆ ಭೂಸ್ವಾಧೀನ ಪ್ರಸ್ತಾವನೆ ಸ್ವೀಕೃತವಾದ ನಂತರ ಭೂಸ್ವಾಧೀನ ಪ್ರಕ್ರಿಯೆ ಪೂರ್ಣಗೊಳಿಸಿ ಜಮೀನನ್ನು ರೈಲ್ವೆ ಇಲಾಖೆಗೆ ಹಸ್ತಾಂತರಿಸಲಾಗುವುದು ಹಾಗೂ ಶೀಘ್ರಗತಿಯಲ್ಲಿ ಕಾಮಗಾರಿ ಪೂರ್ಣಗೊಳಿಸಲು ರೈಲ್ವೆ ಇಲಾಖೆಯನ್ನು ಕೋರಲಾಗುವುದು. |

**ಸಂಖ್ಯೆ: ಮೂಅಇ 262 ರಾರಾಕೆ 2026**

**(ಎಂ.ಬಿ. ಪಾಟೀಲ)**
ಬೃಹತ್ ಮತ್ತು ಮಧ್ಯಮ ಕೈಗಾರಿಕೆ
ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು